**National**
**Kannada**
**07.09.2026 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು**

1. ರಕ್ಷಣಾ ಪಡೆಗಳಿಗೆ 1.10 ಲಕ್ಷ ಕೋಟಿ ರೂಪಾಯಿ ಮೌಲ್ಯದ ಬಂಡವಾಳ ಸ್ವಾಧೀನ ಪ್ರಸ್ತಾವನೆಗೆ ರಕ್ಷಣಾ ಸ್ವಾಧೀನ ಮಂಡಳಿ ಅನುಮೋದನೆ
2. ಮಾದಕವಸ್ತು ಮುಕ್ತ ಸಮಾಜ ನಿರ್ಮಾಣಕ್ಕೆ ಯುವಕರು ಕೈಜೋಡಿವಂತೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕರೆ
3. ಲಕ್ಸೆಂಬರ್ಗ್ ಉಪಪ್ರಧಾನಿ ಅವರೊಂದಿಗೆ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ದ್ವಿಪಕ್ಷೀಯ ಮಾತುಕತೆ
4. ವಿಶ್ವ ಪ್ಯಾರಾ ಆರ್ಚರಿ; ಮಹಿಳೆಯರ ವಿಭಾಗದ ಫೈನಲ್‌ಗೆ ಭಾರತದ ಶೀತಲ್ ದೇವಿ ಲಗ್ಗೆ

---

ರಕ್ಷಣಾ ಪಡೆಗಳಿಗೆ 1.10 ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಬಂಡವಾಳ ಸ್ವಾಧೀನ ಪ್ರಸ್ತಾವನೆಗಳನ್ನು ಇಂದು ರಕ್ಷಣಾ ಸ್ವಾಧೀನ ಮಂಡಳಿ ಅನುಮೋದಿಸಿದೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ನಡೆದ ಮಂಡಳಿಯ ಸಭೆಯಲ್ಲಿ ಈ ಅನುಮೋದನೆ ನೀಡಲಾಯಿತು. ಭಾರತೀಯ ಸೇನೆಗಾಗಿ ರಾಸಾಯನಿಕ, ಜೈವಿಕ, ವಿಕಿರಣ ಮತ್ತು ಅಣು ಪತ್ತೆ ವಾಹನಗಳು, ಹೈ ಮೊಬಿಲಿಟಿ ವಾಹನಗಳು, ಅತ್ಯಾಧುನಿಕ ಲಘು ಹೆಲಿಕಾಪ್ಟರ್‌ಗಳು ಸೇರಿದಂತೆ ಅಗತ್ಯ ಉತ್ಪನ್ನಗಳು ಖರೀದಿ ಪ್ರಸ್ತಾವನೆಗಳಲ್ಲಿ ಸೇರಿವೆ.

ಇದೇ ವೇಳೆ, ಭಾರತೀಯ ನೌಕಾ ಪಡೆಗಾಗಿ ಆರುದ್ರ ರಾಡಾರ್‌ಗಳು ಮತ್ತು ಯುದ್ಧನೌಕೆ ಪ್ರೊಪಲ್ಷನ್ ವ್ಯವಸ್ಥೆಯಾದ 'ಎಂಜಿಟಿ' ಹಾಗೂ ಭಾರತೀಯ ವಾಯು ಪಡೆಗಾಗಿ ಭೂ–ಆಧಾರಿತ ಬಹುಪಯೋಗಿ ಜಾಮರ್‌ಗಳ ಖರೀದಿಗೆ ಅನುಮೋದನೆ ನೀಡಲಾಗಿದೆ

ಒಟ್ಟು ಶೇಕಡ 98 ರಷ್ಟು ಖರೀದಿಗಳನ್ನು ಭಾರತೀಯ ಕೈಗಾರಿಕೆಗಳಿಂದ ಮಾಡಲಾಗುವುದು. ಇದು ವಿದೇಶಿ ಮಾರಾಟಗಾರರ ಮೇಲಿನ ಅವಲಂಬನೆ ಕಡಿಮೆ ಮಾಡಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

---

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಡ್ಯುರಾಂಡ್ ಕಪ್ ಪಂದ್ಯಾವಳಿ 2026 ರ ಅಧ್ಯಕ್ಷರ ಕಪ್ ಅನ್ನು ವಿಜೇತ ತಂಡವಾದ ಪೂರ್ವ ಬಂಗಾಳ ಫುಟ್ಬಾಲ್ ಕ್ಲಬ್‌ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಎನ್.ಎಸ್.ರಾಜಾ ಸುಬ್ರಮಣಿ, ಡ್ಯುರಾಂಡ್ ಫುಟ್ಬಾಲ್ ಪಂದ್ಯಾವಳಿ ಮಂಡಳಿಯ ಅಧ್ಯಕ್ಷ ಹಾಗೂ ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಧೀರಜ್ ಸೇಠ್, ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ.ಸಿಂಗ್, ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್, ಮಂಡಳಿಯ ಉಪಾಧ್ಯಕ್ಷರು, ಪೂರ್ವ ಬಂಗಾಳ ಫುಟ್ಬಾಲ್ ಕ್ಲಬ್‌ನ ಅಧಿಕಾರಿಗಳು ಮತ್ತು ಆಟಗಾರರು ಉಪಸ್ಥಿತರಿದ್ದರು.

---

ಯುವಜನತೆ ಮಾದಕವಸ್ತು ದುರುಪಯೋಗದ ವಿರುದ್ಧ ದೃಢ ನಿಲುವು ತಳೆದು, ಮಾದಕವಸ್ತು ಮುಕ್ತ ಸಮಾಜ ನಿರ್ಮಾಣಕ್ಕೆ ಸಕ್ರಿಯವಾಗಿ ಕೊಡುಗೆ ನೀಡಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕರೆ ನೀಡಿದ್ದಾರೆ.

ಅಸ್ಸಾಂನ ಗುವಾಹಟಿ ವಿಶ್ವವಿದ್ಯಾಲಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ಅವರು, ಮಾದಕವಸ್ತುಗಳ ವಿರುದ್ಧದ ಹೋರಾಟಕ್ಕೆ ಯುವಜನತೆ ಬದ್ಧರಾಗಿರಬೇಕು. ಶೈಕ್ಷಣಿಕ ಸಂಸ್ಥೆಯ ಮೌಲ್ಯವು ಕೇವಲ ಶ್ರೇಯಾಂಕಗಳಿಂದ ನಿರ್ಧಾರವಾಗುವುದಿಲ್ಲ. ಸಮಾಜವನ್ನು ಪರಿವರ್ತಿಸುವ ಸಾಮರ್ಥ್ಯದಲ್ಲೇ ಅದರ ನಿಜವಾದ ಮೌಲ್ಯ ಅಡಗಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಉಪರಾಷ್ಟ್ರಪತಿ ಅವರು 3 ಪುಸ್ತಕಗಳನ್ನು ಬಿಡುಗಡೆ ಮಾಡಿದರು. ಅಲ್ಲದೇ ಗುವಾಹಟಿ ವಿಶ್ವವಿದ್ಯಾಲಯದಲ್ಲಿ 110 ಕೋಟಿ ರೂಪಾಯಿ ವೆಚ್ಚದ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

---

ಇಡೀ ಜಗತ್ತು ಅನಿಶ್ಚಿತತೆಯ ಬಗ್ಗೆ ಚಿಂತಿತರಾಗಿರುವ ಯುಗದಲ್ಲಿ, ಭಾರತ ಮತ್ತು ಲಕ್ಸೆಂಬರ್ಗ್ ವಿಶ್ವಾಸಾರ್ಹ ಸಂಬಂಧ ಹೊಂದಿವೆ ಎಂದು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಹೇಳಿದ್ದಾರೆ.

ಲಕ್ಸೆಂಬರ್ಗ್‌ನ ಉಪಪ್ರಧಾನಿ, ವಿದೇಶಾಂಗ ಸಚಿವ ಕ್ಸೇವಿಯರ್ ಬೆಟ್ಟೆಲ್ ಅವರನ್ನು ನವದೆಹಲಿಯಲ್ಲಿ ಇಂದು ಭೇಟಿಯಾದ ಸಂದರ್ಭದಲ್ಲಿ ಡಾ. ಜೈಶಂಕರ್ ಈ ವಿಷಯ ತಿಳಿಸಿದರು.

ಈ ಭೇಟಿಯು ಭಾರತ ಮತ್ತು ಲಕ್ಸೆಂಬರ್ಗ್ ನಡುವಿನ ಬೆಳೆಯುತ್ತಿರುವ ಮತ್ತು ಆಳವಾದ ಪಾಲುದಾರಿಕೆಯನ್ನು ಸೂಚಿಸುತ್ತದೆ. ವ್ಯಾಪಾರ, ಹೂಡಿಕೆ, ಆರ್ಥಿಕ ಸಹಕಾರವು ಪ್ರಮುಖವಾಗಿದ್ದು, ಇವುಗಳನ್ನು ಮೀರಿ ಎರಡೂ ಕಡೆಯವರು ಬಾಹ್ಯಾಕಾಶ, ಡಿಜಿಟಲ್ ಮತ್ತು ಹಸಿರು ತಂತ್ರಜ್ಞಾನಗಳಲ್ಲಿ ಸಹಕಾರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಗಮನಹರಿಸಬೇಕಿದೆ ಎಂದರು.

ಲಕ್ಸೆಂಬರ್ಗ್ ಉಪ ಪ್ರಧಾನಿ ಕ್ಸೇವಿಯರ್ ಬೆಟ್ಟೆಲ್ ಮಾತನಾಡಿ, ಭಾರತದೊಂದಿಗೆ ಲಕ್ಸೆಂಬರ್ಗ್ ವಿಶ್ವಾಸಾರ್ಹ ಮತ್ತು ಪ್ರಾಮಾಣಿಕ ಸಂಬಂಧವನ್ನು ಹೊಂದಿದೆ. ಸಂಬಂಧವನ್ನು ಗಾಢವಾಗಿಸಲು ಎರಡೂ ಕಡೆಯವರು ಸಾಕಷ್ಟು ಕೆಲಸ ಮಾಡಿದ್ದಾರೆ ಎಂದು ಹೇಳಿದರು.

---

ನವದೆಹಲಿಯ ಸತ್ಯ ನಿಕೇತನ ಪ್ರದೇಶದಲ್ಲಿ ಕಟ್ಟಡ ಕುಸಿತ ಘಟನೆಯಲ್ಲಿ ಮೃತರ ಸಂಖ್ಯೆ ಏಳಕ್ಕೆ ಏರಿಕೆಯಾಗಿದೆ.

ಒಟ್ಟು 12 ಮಂದಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅವರ ಪೈಕಿ 7 ಮಂದಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ರಕ್ಷಿಸಲ್ಪಟ್ಟವರ ಪೈಕಿ ಮೂವರು ಗಂಭೀರ ಸ್ಥಿತಿಯಲ್ಲಿದ್ದು, ಇಬ್ಬರ ಆರೋಗ್ಯ ಸ್ಥಿರವಾಗಿದೆ. ಒಬ್ಬರನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದೆ ಎಂದು ಏಮ್ಸ್ ದೆಹಲಿ ತಿಳಿಸಿದೆ.

ಇದೇ ವೇಳೆ, ಕಟ್ಟಡ ಕುಸಿದ ಘಟನೆಯ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸುವಂತೆ ಮತ್ತು ಆ ಕಟ್ಟಡವನ್ನು ಮಾನ್ಯ ಅನುಮತಿಗಳೊಂದಿಗೆ ನಿರ್ಮಿಸಲಾಗಿದೆಯೇ ಹಾಗೂ ನಿರ್ವಹಿಸಲಾಗಿದೆಯೇ ಎಂದು ಪರಿಶೀಲಿಸುವಂತೆ ದೆಹಲಿ ಹೈಕೋರ್ಟ್, ದೆಹಲಿ ಮಹಾನಗರ ಪಾಲಿಕೆಗೆ ನಿರ್ದೇಶಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಸರ್ಕಾರ, ದಕ್ಷಿಣ ವಲಯದ ಎಂಸಿಡಿ ಉಪ ಆಯುಕ್ತ ರಾಕೇಶ್ ಕುಮಾರ್, ಅಧೀಕ್ಷಕ ಎಂಜಿನಿಯರ್ ರಣವೀರ್ ಸಿಂಗ್, ಕಾರ್ಯಪಾಲಕ ಎಂಜಿನಿಯರ್ ಲಲಿತ್ ಕುಮಾರ್, ಸಹಾಯಕ ಎಂಜಿನಿಯರ್ ಸುನಿಲ್ ಚೌಹಾಣ್ ಹಾಗೂ ಕಿರಿಯ ಎಂಜಿನಿಯರ್ ಒಬ್ಬರನ್ನು ಅಮಾನತುಗೊಳಿಸಿದೆ.

---

ಪ್ರಧಾನಿ ನರೇಂದ್ರ ಮೋದಿ ನಾಳೆ ಗುಜರಾತ್ ಮತ್ತು ಮಹಾರಾಷ್ಟ್ರ ರಾಜ್ಯಕ್ಕೆ ಭೇಟಿ ನೀಡಲಿದ್ದು, ವಡೋದರದಲ್ಲಿ 35 ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಹಲವು ಮೂಲಸೌಕರ್ಯ ಹಾಗೂ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ.

ಇದೇ ವೇಳೆ ಹಲವು ಸರಕು ರೈಲು ಸೇವೆಗಳಿಗೆ ಹಾಗೂ ವಡೋದರ–ತಾಂಡ ನಡುವಿನ ನೂತನ ರೈಲು ಸೇವೆಗೆ ಹಸಿರು ನಿಶಾನೆ ತೋರಲಿದ್ದಾರೆ. 9 ಸಾವಿರದ 700 ಕೋಟಿ ರೂಪಾಯಿ ಮೌಲ್ಯದ ಮೂರು ರೈಲ್ವೆ ಯೋಜನೆಗಳು, 1 ಸಾವಿರದ 780 ಕೋಟಿ ರೂಪಾಯಿ ವೆಚ್ಚದ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಹಾಗೂ ಗುಜರಾತ್ ಸರ್ಕಾರದ 2 ಸಾವಿರದ 600 ಕೋಟಿ ರೂಪಾಯಿ ಮೌಲ್ಯದ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ, ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

ಮಹಾರಾಷ್ಟ್ರ ಪ್ರವಾಸದ ಭಾಗವಾಗಿ ಪ್ರಧಾನಿ ಮುಂಬೈನಲ್ಲಿ ನಡೆಯಲಿರುವ ಜಾಗತಿಕ ಫಿನ್‌ಟೆಕ್ ಉತ್ಸವ – 2026 ಅನ್ನು ಉದ್ಘಾಟಿಸಿ ಭಾಷಣ ಮಾಡಲಿದ್ದಾರೆ.

---

ಭಾರತದ ವೈದ್ಯಕೀಯ ಪ್ರವಾಸೋದ್ಯಮವು ಆರ್ಥಿಕ ಬೆಳವಣಿಗೆಗೆ ವೇಗ ನೀಡುವ, ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತದ ಬಗ್ಗೆ ಸದ್ಭಾವನೆ ಮೂಡಿಸುವ ಅಪಾರ ಸಾಮರ್ಥ್ಯ ಹೊಂದಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ 'ಹೆಲ್ತ್‌ಕೇರ್ ಅಂಡ್ ವೆಲ್‌ನೆಸ್ ಎಕ್ಸ್‌ಪೋ–ಸಂಜೀವನಿ 2026' ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಬಲಿಷ್ಠ ವೈದ್ಯಕೀಯ ವ್ಯವಸ್ಥೆಯ ಮೂಲಕ ಜಾಗತಿಕ ಆರೋಗ್ಯ ಸೇವೆಗಳ ಅಗತ್ಯಗಳನ್ನು ಪೂರೈಸುವಲ್ಲಿ ಭಾರತ ಹೊಂದಿರುವ ಸಾಮರ್ಥ್ಯವನ್ನು ಈ ಕಾರ್ಯಕ್ರಮ ಮುನ್ನೆಲೆಗೆ ತರುತ್ತಿದೆ ಎಂದರು.

ಕೊರೊನಾ ಸಾಂಕ್ರಾಮಿಕದ ಸಂದರ್ಭದಲ್ಲಿ ಭಾರತದ ಪಾತ್ರವನ್ನು ಪ್ರಸ್ತಾಪಿಸಿದ ಸಚಿವರು, ಅಗತ್ಯವಿದ್ದವರಿಗೆ ಔಷಧಗಳು ಮತ್ತು ವೈದ್ಯಕೀಯ ಉಪಕರಣಗಳನ್ನು ಪೂರೈಸಲು ಭಾರತ, ಹಗಲು–ರಾತ್ರಿ ಕಾರ್ಯನಿರ್ವಹಿಸುವ ತ್ವರಿತ ಸಹಾಯವಾಣಿ ವ್ಯವಸ್ಥೆ ಮಾಡಿತ್ತು. ಅಲ್ಲದೆ, 100ಕ್ಕೂ ಹೆಚ್ಚು ದೇಶಗಳಿಗೆ ತುರ್ತು ವೈದ್ಯಕೀಯ ಸಾಮಗ್ರಿಗಳನ್ನು ವಿಮಾನದ ಮೂಲಕ ರವಾನಿಸಿತ್ತು ಎಂದು ಹೇಳಿದರು.

---

ರಾಜ್ಯಗಳ ಭಾಗವಹಿಸುವಿಕೆಯ ಮೂಲಕ ಕೃಷಿ ವಿಜ್ಞಾನ ಕೇಂದ್ರಗಳನ್ನು ಬಲಪಡಿಸುವ ಕ್ರಿಯಾ ಯೋಜನೆಯನ್ನು ಪರಿಶೀಲಿಸಲು ನವದೆಹಲಿಯಲ್ಲಿ ಇಂದು ನಡೆದ ಸಭೆಯ ಅಧ್ಯಕ್ಷತೆಯನ್ನು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ವಹಿಸಿದ್ದರು.

2027 ರ ಮಾರ್ಚ್ ವೇಳೆಗೆ 300 ಆದ್ಯತೆಯ ಕೃಷಿ ವಿಜ್ಞಾನ ಕೇಂದ್ರಗಳ ಮೂಲಸೌಕರ್ಯ ಮತ್ತು ಲಾಜಿಸ್ಟಿಕ್ಸ್ ಅನ್ನು ನವೀಕರಿಸುವ ಕ್ರಿಯಾ ಅಂಶದ ಕುರಿತು ಚರ್ಚೆಗಳು ಕೇಂದ್ರೀಕೃತವಾಗಿದ್ದವು. ಸಭೆಯಲ್ಲಿ, ನಿಗದಿತ ಸಮಯದೊಳಗೆ ಗುರಿ ಸಾಧಿಸಲು ರಾಜ್ಯ ಸರ್ಕಾರಗಳಿಂದ ಸಕ್ರಿಯ ಭಾಗವಹಿಸುವಿಕೆ ಮತ್ತು ಸಕಾಲಿಕ ಬೆಂಬಲದ ಅಗತ್ಯವನ್ನು ಅವರು ಒತ್ತಿ ಹೇಳಿದರು.

---

ರಾಷ್ಟ್ರೀಯ ಸ್ವಯಂಸೇವಕ ಸಂಘದ ಕೆಲಸವು 'ಶುದ್ಧ ಸಾತ್ವಿಕ ಪ್ರೇಮ' ಅಥವಾ ಶುದ್ಧ ಮತ್ತು ಉದಾತ್ತ ಪ್ರೀತಿಯ ತತ್ವಶಾಸ್ತ್ರದ ಮೇಲೆ ಸ್ಥಾಪಿತವಾಗಿದೆ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಪ್ರತಿಪಾದಿಸಿದ್ದಾರೆ.

ರಾಷ್ಟ್ರೀಯ ಸ್ವಯಂಸೇವಕ ಸಂಘದ ಶತಮಾನೋತ್ಸವದ ಸಂದರ್ಭದಲ್ಲಿ ಲಂಡನ್‌ನಲ್ಲಿ ನಡೆದ ಸಂವಾದದಲ್ಲಿ ಮಾತನಾಡಿದ ಅವರು, ಏಕತೆಯ ಭಾವನೆಯು ಹಿಂದೂ ಚಿಂತನೆ ಮತ್ತು ಆರ್‌ಎಸ್‌ಎಸ್ ವಿಧಾನದ ಕೇಂದ್ರವಾಗಿದೆ. ಈ ಭಾವನೆಯು ವ್ಯಕ್ತಿಯನ್ನು ಮೀರಿ ಕುಟುಂಬ, ಸಮುದಾಯ, ಸಮಾಜ ಮತ್ತು ಮಾನವೀಯತೆಗೆ ವಿಸ್ತರಿಸುತ್ತದೆ ಹಾಗೂ ಪ್ರಕೃತಿಯೊಂದಿಗೆ ಹಿಂದೂ ನಾಗರಿಕತೆಯ ಸಂಪರ್ಕವನ್ನು ಒತ್ತಿಹೇಳುತ್ತದೆ ಎಂದು ಅವರು ವಿವರಿಸಿದರು.

---

ಅಹಮದಾಬಾದ್‌ನಲ್ಲಿ ನಡೆಯುತ್ತಿರುವ ವಿಶ್ವ ಪ್ಯಾರಾ ಆರ್ಚರಿ ಸರಣಿಯ ಮೂರನೇ ಹಂತದಲ್ಲಿ ಹಾಲಿ ವಿಶ್ವ ಚಾಂಪಿಯನ್ ಶೀತಲ್ ದೇವಿ, ಮಹಿಳೆಯರ ಕಾಂಪೌಂಡ್ ವೈಯಕ್ತಿಕ ವಿಭಾಗದ ಫೈನಲ್ ಪ್ರವೇಶಿಸುವ ಮೂಲಕ ಭಾರತಕ್ಕೆ ಪದಕ ಖಚಿತಪಡಿಸಿದ್ದಾರೆ.

ಅವರು ಸೆಮಿಫೈನಲ್‌ನಲ್ಲಿ ಸರಿತಾ ಅವರನ್ನು 145–143 ಅಂತರದಿಂದ ಮಣಿಸಿದರು. ಫೈನಲ್‌ನಲ್ಲಿ ಅವರು ಕಜಕಿಸ್ತಾನದ ಐರ್ಯೂದಾ ಸೈದಾನ್ ಅವರನ್ನು ಎದುರಿಸಲಿದ್ದಾರೆ.

ಸರಿತಾ, ಕಂಚಿನ ಪದಕಕ್ಕಾಗಿ ಚೀನಾದ ವಾಂಗ್ ಹುಯಿಟಿಂಗ್ ವಿರುದ್ಧ ಸೆಣಸಲಿದ್ದಾರೆ.

ಪುರುಷರ ಕಾಂಪೌಂಡ್ ವಿಭಾಗದ ಸೆಮಿಫೈನಲ್‌ನಲ್ಲಿ ತೋಮನ್ ಕುಮಾರ್, ಇಂಡೋನೇಷ್ಯಾದ ಕೆನ್ ಸ್ವಾಗುಮಿಲಾಂಗ್ ವಿರುದ್ಧ 146–144 ಅಂತರದಿಂದ ಸೋತಿದ್ದು, ಕಂಚಿನ ಪದಕಕ್ಕಾಗಿ ಇರಾಕ್‌ನ ಅಬ್ಬಾಸ್ ಕಧೀಮ್ ಅವರನ್ನು ಎದುರಿಸಲಿದ್ದಾರೆ.

W1 ವಿಭಾಗದಲ್ಲಿ ಸ್ವಾತಿ ಚೌಧರಿ ಕಂಚಿನ ಪದಕಕ್ಕಾಗಿ ಸ್ಪರ್ಧಿಸಲಿದ್ದಾರೆ.

---

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ–ಸೆನ್ಸೆಕ್ಸ್ 383 ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ 76 ಸಾವಿರದ 133 ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ–ನಿಫ್ಟಿ 119 ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ 23 ಸಾವಿರದ 779 ಅಂಕಗಳು ದಾಖಲಾಗಿದೆ.

ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ 94 ರೂಪಾಯಿ 49 ಪೈಸೆಯಷ್ಟಾಗಿದೆ.

__________ ಮುಕ್ತಾಯ __________